# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 980 |
| ಸದಸ್ಯರ ಹೆಸರು | ಶ್ರೀ ಎನ್. ರವಿಕುಮಾರ್ |
| ಉತ್ತರಿಸುವ ದಿನಾಂಕ | 20.08.2025 |
| ಉತ್ತರಿಸುವವರು | ಸಾರಿಗೆ ಮತ್ತು ಧಾರ್ಮಿಕ ದತ್ತಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | 2022-23ನೇ ಸಾಲಿನ ಆಯವ್ಯಯದಲ್ಲಿ ಮುಜರಾಯಿ ಇಲಾಖೆ ಆಡಳಿತ ವ್ಯಾಪ್ತಿಗೆ ಒಳಪಟ್ಟಿರುವ ದೇವಸ್ಥಾನಗಳಿಗೆ ಸ್ವಾಯತ್ತತೆ ನೀಡಲು ಕ್ರಮವಹಿಸಲಾಗುವುದಾಗಿ ಘೋಷಿಸಿದ್ದು, ಅದರಂತೆ ಇದುವರೆಗೆ ಎಷ್ಟು ದೇವಸ್ಥಾನಗಳಿಗೆ ಸ್ವಾಯತ್ತತೆ ನೀಡಲಾಗಿದೆ. (ಜಿಲ್ಲಾವಾರು ವಿವರ ನೀಡುವುದು) | 2022-23ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 367ರಲ್ಲಿ ಈ ಬಗ್ಗೆ ಘೋಷಿಸಲಾಗಿದೆ.<br><br>ಈ ಕುರಿತು ಕಾನೂನಾತ್ಮಕವಾಗಿ ಆದೇಶ ಹೊರಡಿಸಿರುವುದಿಲ್ಲ. |
| ಆ) | ದೇವಸ್ಥಾನಗಳಿಗೆ ಯಾವ ರೀತಿಯಲ್ಲಿ ಸ್ವಾಯತ್ತತೆ ನೀಡಲಾಗಿದೆ. ಸಂಪೂರ್ಣ ಸ್ವಾಯತ್ತತೆ ಎಂದರೇನು; ಸರ್ಕಾರದ ಯಾವುದೇ ರೀತಿಯ ಹಸ್ತಕ್ಷೇಪವು ದೇವಸ್ಥಾನದ ದೈನಂದಿನ ಪೂಜೆ ವ್ಯವಸ್ಥೆಗಳಲ್ಲಿ ಇರದಿರುವುದನ್ನು ಸ್ವಾಯತ್ತತೆ ಎಂದು ಕರೆಯಲಾಗಿದೆಯೇ; (ಈ ಕುರಿತು ಸರ್ಕಾರದ ನಿಲುವೇನು) | ಧಾರ್ಮಿಕ ದತ್ತಿ ಇಲಾಖಾ ವ್ಯಾಪ್ತಿಯ 'ಎ' ಮತ್ತು 'ಬಿ' ವರ್ಗದ ದೇವಾಲಯಗಳಲ್ಲಿ ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ಅಧಿನಿಯಮ 1997ರ ಕಾಯ್ದೆ ಕಲಂ 25ರನ್ವಯ ಸ್ಥಳೀಯರನ್ನೊಳಗೊಂಡಂತೆ 09 ಜನ ಸದಸ್ಯರ ವ್ಯವಸ್ಥಾಪನಾ ಸಮಿತಿ ರಚಿಸಲಾಗುತ್ತದೆ.<br><br>ರಾಜ್ಯದಲ್ಲಿ ಈ ಕೆಳಕಂಡಂತೆ ಧಾರ್ಮಿಕ ದತ್ತಿ ಇಲಾಖೆಯ ವ್ಯಾಪ್ತಿಯಲ್ಲಿ ದೇವಾಲಯಗಳು ಇರುತ್ತವೆ.<br><br>ಗ್ರೂಪ್-ಎ: 205<br>ಗ್ರೂಪ್-ಬಿ: 193<br>ಗ್ರೂಪ್-ಸಿ: 34,168 |
| ಇ) | ದೇವಸ್ಥಾನಗಳ ಆಡಳಿತ ವ್ಯವಸ್ಥೆ ಹಾಗೂ ದೈನಂದಿನ ಕಾರ್ಯಭಾರಗಳನ್ನು ಸದರಿ ದೇವಸ್ಥಾನದ ಭಕ್ತರ ಅಧೀನಕ್ಕೆ ನೀಡುವ ಕುರಿತು. ಸರ್ಕಾರದ ನಿಲುವೇನು; | ಗ್ರೂಪ್ - ಎ ವರ್ಗದ ದೇವಾಲಯಗಳಿಗೆ ರಾಜ್ಯ ಧಾರ್ಮಿಕ ಪರಿಷತ್ತು ವ್ಯವಸ್ಥಾಪನಾ ಸಮಿತಿಯನ್ನು ರಚಿಸಲು ಅಧಿಕಾರ ಹೊಂದಿದೆ ಹಾಗೂ ಗ್ರೂಪ್-ಬಿ ಮತ್ತು ಸಿ ವರ್ಗದ ದೇವಾಲಯಗಳಿಗೆ ವ್ಯವಸ್ಥಾಪನಾ ಸಮಿತಿಯನ್ನು ರಚಿಸಲು ಜಿಲ್ಲಾ ಧಾರ್ಮಿಕ ಪರಿಷತ್ ಅಧಿಕಾರ ಹೊಂದಿರುತ್ತದೆ. |
| ಈ) | ಪ್ರತಿ ದೇವಸ್ಥಾನಕ್ಕೆ ಅದರ ಭಕ್ತರನ್ನೇ ಸದಸ್ಯರನ್ನಾಗಿ ನೋಂದಾಯಿಸಲು ಅವಕಾಶ ಮಾಡಿಕೊಟ್ಟ ಆ ಸದಸ್ಯರ ಮೂಲಕ ಚುನಾಯಿತ ಸಮಿತಿಯನ್ನು ದೇವಸ್ಥಾನದ ದೈನಂದಿನ ಆಡಳಿತ ನೋಡಿಕೊಳ್ಳಲು ಅವಕಾಶ ಕಲ್ಪಿಸುವ ಮೂಲಕ ದೇವಸ್ಥಾನಗಳನ್ನು ಸರ್ಕಾರಿ ಆಡಳಿತದಿಂದ ಮುಕ್ತಗೊಳಿಸುವ ಕುರಿತು ಸರ್ಕಾರದ ನಿಲುವೇನು? | ಈ ಒಂಭತ್ತು ಸದಸ್ಯರ ಪೈಕಿ ಒಬ್ಬರನ್ನು ಅಧ್ಯಕ್ಷರನ್ನಾಗಿ ಆಯ್ಕೆ ಮಾಡಿಕೊಂಡು ದೇವಾಲಯದ ದೈನಂದಿನ ಪೂಜೆ, ನಿರ್ವಹಣೆ, ವಾರ್ಷಿಕ ಆಯವ್ಯಯ ಮತ್ತು ಮೂಲಭೂತ ಸೌಕರ್ಯ ಇತ್ಯಾದಿಗಳ ಬಗ್ಗೆ ಚರ್ಚಿಸಿ **ನಿರ್ಣಯ ಕೈಗೊಳ್ಳಲು ಸಮಿತಿಯು ಸ್ವತಂತ್ರವಾಗಿರುತ್ತದೆ.**<br><br>ಮುಂದುವರೆದು, ದೇವಾಲಯಗಳ ಅಭಿವೃದ್ಧಿ ದೃಷ್ಟಿಯಿಂದ ಈ ಕೆಳಕಂಡ ಅಧಿಸೂಚಿತ ಸಂಸ್ಥೆಗಳಿಗೆ ಅಭಿವೃದ್ಧಿ ಪ್ರಾಧಿಕಾರ ರಚಿಸಲಾಗಿರುತ್ತದೆ.<br><br>(1) ಶ್ರೀ ಮಲೈ ಮಹದೇಶ್ವರ ದೇವಸ್ಥಾನ, ಮಹದೇಶ್ವರ ಬೆಟ್ಟ, ಕೊಳ್ಳೇಗಾಲ ತಾಲ್ಲೂಕು ಚಾಮರಾಜನಗರ ಜಿಲ್ಲೆ<br>(2) ಶ್ರೀ ಚಾಮುಂಡೇಶ್ವರಿ ದೇವಸ್ಥಾನ, ಚಾಮುಂಡಿ ಬೆಟ್ಟ, ಮೈಸೂರು |

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td></td><td></td><td>
<table>
<tr><td>(3)</td><td>ಶ್ರೀ ಘಾಟಿ ಸುಬ್ರಹ್ಮಣ್ಯ ಸ್ವಾಮಿ ದೇವಾಲಯ, ಎಸ್. ಎಸ್. ಘಾಟಿ, ದೊಡ್ಡಬಳ್ಳಾಪುರ ತಾಲ್ಲೂಕು ,ಬೆಂಗಳೂರು ಗ್ರಾಮಾಂತರ ಜಿಲ್ಲೆ,</td></tr>
<tr><td>(4)</td><td>ಶ್ರೀ ಹುಲಿಗೆಮ್ಮ ದೇವಾಲಯ, ಹುಲಿಗಿ, ಕೊಪ್ಪಳ ತಾಲ್ಲೂಕು, ಕೊಪ್ಪಳ ಜಿಲ್ಲೆ</td></tr>
<tr><td>(5)</td><td>ಶ್ರೀ ರೇಣುಕಾ ಯಲ್ಲಮ್ಮ ದೇವಾಲಯ, ಯಲ್ಲಮ್ಮನಗುಡ್ಡ, ಸವದತ್ತಿ ತಾಲ್ಲೂಕು, ಬೆಳಗಾವಿ ಜಿಲ್ಲೆ</td></tr>
</table>
ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ(ತಿದ್ದುಪಡಿ) ಅಧಿನಿಯಮ 2011ರ ಸೆಕ್ಷನ್ 25ರನ್ವಯ ಅಧಿಸೂಚಿತ ಸಂಸ್ಥೆಗಳ ಒಟ್ಟು ವಾರ್ಷಿಕ ಆದಾಯವು ರೂ.25.00 ಲಕ್ಷಗಳನ್ನು ಮೀರಿದ್ದಲ್ಲಿ ಅಂತಹ ಅಧಿಸೂಚಿತ ಸಂಸ್ಥೆಗಳಿಗೆ (ಪ್ರವರ್ಗ ‘ಎ’) ವ್ಯವಸ್ಥಾಪನಾ ಸಮಿತಿಯನ್ನು ರಚಿಸಲು ರಾಜ್ಯ ಧಾರ್ಮಿಕ ಪರಿಷತ್ತು ಸಕ್ಷಮ ಪ್ರಾಧಿಕಾರವಾಗಿದ್ದು, 73 ದೇವಾಲಯಗಳಿಗೆ ವ್ಯವಸ್ಥಾಪನಾ ಸಮಿತಿ ರಚಿಸಲಾಗಿರುತ್ತದೆ ಹಾಗೂ ಅಧಿಸೂಚಿತ ಸಂಸ್ಥೆಗಳ ಒಟ್ಟು ವಾರ್ಷಿಕ ಆದಾಯವು ರೂ. 25.00ಲಕ್ಷಗಳನ್ನು ಮೀರದ ರೂ.1.00 ಲಕ್ಷಕ್ಕಿಂತ ಹೆಚ್ಚು ಆದಾಯವಿರುವ ಅಧಿಸೂಚಿತ ಸಂಸ್ಥೆಗಳಿಗೆ (ಪ್ರವರ್ಗ ‘ಬಿ’ ಮತ್ತು ಪ್ರವರ್ಗ ‘ಸಿ’) ವ್ಯವಸ್ಥಾಪನಾ ಸಮಿತಿಯನ್ನು ರಚಿಸಲು ಸಂಬಂಧಪಟ್ಟ ಜಿಲ್ಲೆಗಳ ಜಿಲ್ಲಾ ಧಾರ್ಮಿಕ ಪರಿಷತ್ತು ಸಕ್ಷಮ ಪ್ರಾಧಿಕಾರವಾಗಿರುತ್ತದೆ.
ದೇವಾಲಯಗಳನ್ನು ಇನ್ನು ಹೆಚ್ಚಾಗಿ/ಉತ್ತಮವಾಗಿ ಅಭಿವೃದ್ಧಿ ಪಡಿಸುವ ಹಿತದೃಷ್ಟಿಯಿಂದ ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ದರ್ಮಾದಾಯ ದತ್ತಿಗಳ ನಿಯಮಗಳು 2002ರ ನಿಯಮ 40ಬಿ ಮತ್ತು ಸುತ್ತೋಲೆ ಸಂಖ್ಯೆ:ಎಡಿಎಂ-8/ ಸಿಆರ್/82/2014-15, ದಿನಾಂಕ: 12.01.2015 ಮತ್ತು ದಿನಾಂಕ:04.04.2015 ಸುತ್ತೋಲೆಯನ್ವಯ ಇಲಾಖಾ ಆಡಳಿತಕ್ಕೆ ಒಳಪಡುವ 14 ಪ್ರವರ್ಗ “ಎ” ದೇವಾಲಯಗಳಿಗೆ ಅಭಿವೃದ್ಧಿ/ ಜೀರ್ಣೋದ್ಧಾರ ಸಮಿತಿಯನ್ನು ರಚಿಸಲಾಗಿರುತ್ತದೆ.
ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ಅಧಿನಿಯಮ 1997 ಕಲಂ 58 ರಲ್ಲಿ ಈ ಅಧಿನಿಯಮದಡಿಯಲ್ಲಿ ಅಧಿಕಾರಗಳನ್ನು ಚಲಾಯಿಸುತ್ತಿರುವ ಅಥವಾ ಪ್ರಕಾರ್ಯಗಳನ್ನು ನಿರ್ವಹಿಸುತ್ತಿರುವ ಆಯುಕ್ತರು, ಉಪ ಆಯುಕ್ತರು ಮತ್ತು ಸಹಾಯಕ ಆಯುಕ್ತರು ಮತ್ತು ಇತರ ಪ್ರತಿಯೊಬ್ಬ ವ್ಯಕ್ತಿಯು ಯಾವ ಅಧಿಸೂಚಿತ ಸಂಸ್ಥೆ ಅಥವಾ ಘೋಷಿತ ಸಂಸ್ಥೆಯ ಸಂಬಂಧದಲ್ಲಿ ಅಂಥ ಅಧಿಕಾರಗಳನ್ನು ಚಲಾಯಿಸಲಾಗುತ್ತಿದೆಯೋ ಅಂಥ ಸಂಸ್ಥೆಗೆ ಸೂಕ್ತವಾದ ಸಂಪ್ರದಾಯ, ಆಚರಣೆ ಸಮಾರಂಭ ಮತ್ತು ಪದ್ಧತಿಗಳಲ್ಲಿ ಹಸ್ತಕ್ಷೇಪ ಮಾಡತಕ್ಕದ್ದಲ್ಲ ಮತ್ತು ಅವುಗಳನ್ನು ಪಾಲಿಸತಕ್ಕದ್ದು ಎಂದಿರುತ್ತದೆ.
ಈ ಹಿನ್ನೆಲೆಯಲ್ಲಿ ಧಾರ್ಮಿಕ ದತ್ತಿ ಇಲಾಖೆಯ ಆಡಳಿತ ವ್ಯಾಪ್ತಿಯಲ್ಲಿ ಬರುವ ದೇವಾಲಯಗಳ ಆಚರಣೆ, ಸಮಾರಂಭ ಮತ್ತು ಪದ್ಧತಿಗಳಲ್ಲಿ ಯಾವುದೇ ಹಸ್ತಕ್ಷೇಪಕ್ಕೆ ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ಅಧಿನಿಯಮ 1997 ಕಲಂ 58ರಡಿಯಲ್ಲಿ ಆಸ್ಪದವಿರುವುದಿಲ್ಲ.
</td></tr>
</table>

ಸಂಖ್ಯೆ: ಕಂಇ 178 ಮುಸಪ್ರ 2025

(ರಾಮಲಿಂಗಾರೆಡ್ಡಿ)
ಸಾರಿಗೆ ಮತ್ತು ಧಾರ್ಮಿಕ ದತ್ತಿ ಸಚಿವರು